**ಕರ್ನಾಟಕ ಸರ್ಕಾರ – ಅರಣ್ಯ ಇಲಾಖೆ**

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ ಇವರ ಕಛೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು–560003**

# ಪ್ರಕಟಣೆ

**ಅಧಿಸೂಚನೆ ಸಂಖ್ಯೆ: ಬಿ9–ನೇಮಕಾತಿ–ವಿವ–4/2015–16 ದಿನಾಂಕ: 28.03.2016 ಮತ್ತು ಬಿ9–ನೇಮಕಾತಿ–ವಿವ–3/2015–16 ದಿನಾಂಕ: 23.03.2016**

**460 ಉಪ ವಲಯ ಅರಣ್ಯಾಧಿಕಾರಿ ಹಾಗೂ 555 ಅರಣ್ಯ ರಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ.**

* * * * *

460 ಉಪ ವಲಯ ಅರಣ್ಯಾಧಿಕಾರಿ ಹಾಗೂ 555 ಅರಣ್ಯ ರಕ್ಷಕ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಈಗಾಗಲೇ 395 ಉಪ ವಲಯ ಅರಣ್ಯಾಧಿಕಾರಿಗಳ ಹಾಗೂ 416 ಅರಣ್ಯ ರಕ್ಷಕ ಹುದ್ದೆಗಳಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿ ಹಾಗೂ ಸ್ಥಳ ಹಂಚಿಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

ಈ ಕಛೇರಿಯ ದಿನಾಂಕ:07.07.2017ರ ಪ್ರಕಟಣೆಯಲ್ಲಿ ಇದುವರೆಗೆ ಅರಣ್ಯ ರಕ್ಷಕ ಹಾಗೂ ಉಪ ವಲಯ ಅರಣ್ಯಾಧಿಕಾರಿ ಹುದ್ದೆಗೆ ಆಯ್ಕೆಯಾಗಿರುವ ಅಭ್ಯರ್ಥಿಗಳ ಪೈಕಿ ಸಂಬಂಧಿಸಿದ ಪ್ರಾಧಿಕಾರದ ಮುಂದೆ ಹಾಜರಾಗದೆ ಇರುವ ಅಭ್ಯರ್ಥಿಗಳಿಗೆ ದಿನಾಂಕ:17.07.2017ರೊಳಗಾಗಿ ಹಾಜರಾಗಲು ಒಂದು ಅವಕಾಶವನ್ನು ನೀಡಲಾಗಿತ್ತು. ಅದಾಗ್ಯೂ ಇನ್ನು ಕೆಲವು ಅಭ್ಯರ್ಥಿಗಳು ಹಾಜರಾಗಿರುವುದಿಲ್ಲ.

ಆದ್ದರಿಂದ ಆಯ್ಕೆಯಾಗಿರುವ ಅಭ್ಯರ್ಥಿಗಳ ಪೈಕಿ ಈವರೆಗೆ ಹಾಜರಾಗದೇ ಇರುವ ಅಭ್ಯರ್ಥಿಗಳು ಸ್ಥಳ ಹಂಚಿಕೆಯಾದ ವೃತ್ತ/ವಿಭಾಗ ಕಛೇರಿಯ ಮುಖ್ಯಸ್ಥರ ಸಮ್ಮುಖ ದಿನಾಂಕ:06.09.2017ರೊಳಗಾಗಿ ಹಾಜರಾಗಲು ಅಂತಿಮ ಅವಕಾಶ ನೀಡಲಾಗಿದೆ. ಸದರಿ ದಿನಾಂಕದೊಳಗೆ ಹಾಜರಾಗದೇ ಇದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯ್ಕೆ ಪ್ರಕ್ರಿಯೆಯಿಂದ ಕೈಬಿಟ್ಟು ಕಾಯುವಿಕೆ ಪಟ್ಟಿಯಿಂದ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ರೋಸ್ಟರ್ ನಿಯಮದಂತೆ ಆಯ್ಕೆ ಮಾಡಲಾಗುವುದು. ಮುಂದೆ ಯಾವುದೇ ಕಾರಣಕ್ಕೂ ದಿನಾಂಕ ವಿಸ್ತರಿಸಲಾಗುವುದಿಲ್ಲವೆಂದು ಈ ಮೂಲಕ ತಿಳಿಸಲಾಗಿದೆ.

ಬೆಂಗಳೂರು
ದಿನಾಂಕ : 29–08–2017

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯಪಡೆ)